# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## -:ವಾರ್ಡ್-37ರ ವಾರ್ಡ್ ಸಮಿತಿ ಸಭೆಯ ನಡವಳಿಗಳು:-

ದಿನಾಂಕ: 05.12.2020 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.37 ಯಶವಂತಪುರ ವಾರ್ಡ್‌ನ, ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ನಂ.37ರ ವಾರ್ಡ್ ಕಛೇರಿ, ಮಾಡೆಲ್ ಕಾಲೋನಿ, 2ನೇ ಅಡ್ಡರಸ್ತೆಯ ಕಟ್ಟಡದಲ್ಲಿ ನಡೆಸಲಾಗಿದ್ದು, ಸದರಿ ಸಭೆಯ ಸಭಾ ನಡವಳಿಗಳು

ಸಭೆಗೆ ಹಾಜರಿದ್ದ ಮಾನ್ಯ ಸದಸ್ಯರು:-

| ಕ್ರಮ ಸಂಖ್ಯೆ | ಸದಸ್ಯರ ಹೆಸರು | ಹುದ್ದೆ | ಪದನಾಮ | ಹಾಜರಾತಿ |
|---|---|---|---|---|
| 1 | ಶ್ರೀ ಎನ್. ಜಿ. ಉಮೇಶ್ | ಸ.ಕಾ.ನಿ.ಅ., | ಅಧ್ಯಕ್ಷರು/ ವಾರ್ಡ್ ನೋಡಲ್ ಅಧಿಕಾರಿ | ಹಾಜರಿದ್ದರು |
| 2 | ಶ್ರೀ ಯಶವಂತ್ ಸಿ. ವಿ. | ಸಹಾಯಕ ಅಭಿಯಂತರರು, | ಸದಸ್ಯ ಕಾರ್ಯದರ್ಶಿ | ಹಾಜರಿದ್ದರು |
| 3 | ಶ್ರೀ ಸೋಮಶೇಖರಯ್ಯ | ಉಪನ್ಯಾಸಕರು | ಕೋವಿಡ್ ನೋಡಲ್ ಅಧಿಕಾರಿ | ಹಾಜರಿದ್ದರು |
| 4 | ಡಾ॥ ಸುನೀತಾ | ವೈದ್ಯಾಧಿಕಾರಿಗಳು, ಪ್ರಾ. ಆ. ಕೇಂ. | ಸದಸ್ಯರು | ಹಾಜರಿದ್ದರು |
| 5 | ಡಾ॥ ಹರ್ಷಿತ್ ಬಿ. ಎಂ. | ಕೋವಿಡ್ ವೈದ್ಯಾಧಿಕಾರಿಗಳು, ಪ್ರಾ. ಆ. ಕೇಂ. | ಸದಸ್ಯರು | ಹಾಜರಿದ್ದರು |
| 6 | ಡಾ॥ ಶ್ರೀನಿವಾಸ್ | ಕೋವಿಡ್ ವೈದ್ಯಾಧಿಕಾರಿಗಳು, ಪ್ರಾ. ಆ. ಕೇಂ. | ಸದಸ್ಯರು | ಹಾಜರಿದ್ದರು |
| 7 | ಶ್ರೀಮತಿ ಸುಜಾತ | ಹಿರಿಯ ಆರೋಗ್ಯ ಪರಿವೀಕ್ಷಕರು | ಸದಸ್ಯರು | ಹಾಜರಿದ್ದರು |
| 8 | ಶ್ರೀಮತಿ ರೇಣುಕಾ | ಕಿರಿಯ ಆರೋಗ್ಯ ಪರಿವೀಕ್ಷಕರು | ಸದಸ್ಯರು | ಹಾಜರಿದ್ದರು |
| 9 | ಶ್ರೀ ಗೋವಿಂದರಾಜು | ಕಂದಾಯ ವಸೂಲಿಗಾರರು | ಸದಸ್ಯರು | ಹಾಜರಿದ್ದರು |
| 10 | ಶ್ರೀ ಚನ್ನೇಶಪ್ಪ | ಸ.ಅ., ಬಿಡಬ್ಲ್ಯೂಎಸ್ಎಸ್‌ಬಿ | ಸದಸ್ಯರು | ಹಾಜರಿದ್ದರು |
| 11 | ಶ್ರೀ ಪುನೀತ್ | ವಾರ್ಡ್ ಮಾರ್ಷಲ್ | ಸದಸ್ಯರು | ಹಾಜರಿದ್ದರು |
| 12 | ತಿರುಪಾಲ್ | ಮೇಲ್ವಿಚಾರಕರು | ಸದಸ್ಯರು | ಹಾಜರಿದ್ದರು |
| 13 | ಮುರಳಿ | ಮೇಲ್ವಿಚಾರಕರು | ಸದಸ್ಯರು | ಹಾಜರಿದ್ದರು |
| 14 | ಜಾನ್ ಬಿ. | ಮೇಲ್ವಿಚಾರಕರು | ಸದಸ್ಯರು | ಹಾಜರಿದ್ದರು |

ವಾರ್ಡ್-37ರ ವಾರ್ಡ್ ಸಮಿತಿ ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಮತ್ತು ಅಧಿಕಾರಿ ವರ್ಗದವರಿಗೆ ಕಾರ್ಯದರ್ಶಿಯವರು ಸ್ವಾಗತಿಸಿ ವಾರ್ಡ್ ಸಮಿತಿ ಸಭೆಯ ಮಾರ್ಗಸೂಚಿಗಳನ್ನು ಸಭೆಗೆ ಸ್ಥೂಲವಾಗಿ ವಿವರಿಸಿದರು.

ಮಾನ್ಯ ಅಧ್ಯಕ್ಷರು, ಸಭೆಯ ಸದಸ್ಯರುಗಳನ್ನು ಪರಸ್ಪರ ಪರಿಚಯ ಮಾಡಿಸಿ, ಮಾರ್ಗಸೂಚಿಯಂತೆ, ಈ ಕೆಳಗಿನ ವಿಷಯಗಳನ್ನು ಸಭೆಯ ಮುಂದಿಟ್ಟು ವಾರ್ಡ್ ಸಮಿತಿ ಸಭೆಯು ನಿರ್ವಹಿಸಬೇಕಾದ ಅಂಶಗಳನ್ನು ತಿಳಿಸಿ, ಅನುಸರಿಸಬೇಕಾದ ಕ್ರಮಗಳನ್ನು ಈ ಕೆಳಕಂಡಂತೆ ಕ್ರಮವಹಿಸಲು ಸಭೆಯಲ್ಲಿ ತೀರ್ಮಾನಿಸಲಾಯಿತು.

**1) ಪಾದಚಾರಿ ಮಾರ್ಗ ಹಾಗೂ ಸಾರ್ವಜನಿಕ ಶೌಚಾಲಯಗಳ ಬಗ್ಗೆ:-**

ಪ್ರಸ್ತಾಪಿತ ವಿಷಯದ ಬಗ್ಗೆ ವಾರ್ಡ್ ಸಹಾಯಕ ಅಭಿಯಂತರರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಒಳಪಡುವ ಎಲ್ಲಾ ಪ್ರದೇಶಗಳಲ್ಲಿ ಸರ್ವೆ ಕಾರ್ಯ ಕೈಗೊಂಡು, ಸಾರ್ವಜನಿಕರ ಅಭಿಪ್ರಾಯ ಪಡೆದು, ಹಾಲಿ ಇರುವ ಸಾರ್ವಜನಿಕ ಶೌಚಾಲಯಗಳ ಸ್ಥಿತಿಗತಿ ಬಗ್ಗೆ ಪರಿವೀಕ್ಷಣೆ ಮಾಡಿ, ಅಗತ್ಯವಿದ್ದಲ್ಲಿ ಹೊಸ ಶೌಚಾಲಯಗಳನ್ನು ನಿರ್ಮಿಸಿಕೊಡುವ ಬಗ್ಗೆ ಮತ್ತು ದುರಸ್ತಿಗೊಂಡಿರುವ ಪಾದಚಾರಿ ಮಾರ್ಗಗಳನ್ನು ಅಭಿವೃದ್ಧಿಪಡಿಸಲು ಹಾಗೂ ಅಗತ್ಯವಿರುವ ಸ್ಥಳಗಳಲ್ಲಿ ಹೊಸ ಪಾದಚಾರಿ ಮಾರ್ಗಗಳನ್ನು ನಿರ್ಮಿಸುವ ಬಗ್ಗೆ ಮುಂದಿನ ಸಭೆಯಲ್ಲಿ ವರದಿ ಸಲ್ಲಿಸಲಾಗುವುದು ಎಂದು ಅಧ್ಯಕ್ಷರ ಅವಗಾಹನೆಗೆ ಮಂಡಿಸಿದರು.

**2) ಆರೋಗ್ಯ ಇಲಾಖೆ:-**

ಹಿಂದಿನ ಸಭೆಯಲ್ಲಿ ಚರ್ಚಿಸಿದಂತೆ, ವಾರ್ಡ್‌ನ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಕೋವಿಡ್ ವ್ಯಾಕ್ಸಿನ್ ಸಂಗ್ರಹಣೆ ಮಾಡಲು ಸಕಲ ಸಿದ್ಧತೆಗಳು ಸಮರೋಪಾದಿಯಲ್ಲಿ ನಡೆಯುತ್ತಿದ್ದು, ಕೊರೊನಾ ವಾರಿಯರ್ಸ್‌ಗಳಿಗೆ ಹಾಗೂ ಹಿರಿಯ ನಾಗರೀಕರಿಗೆ ಚುಚ್ಚುಮದ್ದು ನೀಡಲು ಮೊದಲ ಆದ್ಯತೆಯಿದ್ದು, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಯಾದ ಡಾ|| ಸುನೀತಾರವರು ಪೌರ ಕಾರ್ಮಿಕರ ಪಟ್ಟಿಯನ್ನು ಕೊಡಲು ಹಿಂದಿನ ಸಭೆಗೆ ತಿಳಿಸಿದರು. ಆದರೆ ಕಿರಿಯ ಆರೋಗ್ಯ ಪರಿವೀಕ್ಷಕರು ಇದುವೆಗೂ ಪೌರ ಕಾರ್ಮಿಕರ ಪಟ್ಟಿಯನ್ನು ನೀಡಿರುವುದಿಲ್ಲ. ಆದ್ದರಿಂದ ಅತಿ ತುರ್ತಾಗಿ ಪಟ್ಟಿಯನ್ನು ಕೂಡಲೇ ವೈದ್ಯಾಧಿಕಾರಿಗಳಿಗೆ ನೀಡಲು ಅಧ್ಯಕ್ಷರು ಸೂಚಿಸಿದರು.

ವಾರ್ಡ್‌ನ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಕೋವಿಡ್ ವ್ಯಾಕ್ಸಿನ್ ಸಂಗ್ರಹಣೆ ಮಾಡಲು ಸಕಲ ಸಿದ್ಧತೆಗಳು ನಡೆಯುತ್ತಿದ್ದು, ವ್ಯಾಕ್ಸಿನ್ ಸ್ಟೋರೇಜ್ ಕ್ಯಾರಿಯರ್‌ಗಳನ್ನು ಬಳಸಿ, ಚುಚ್ಚುಮದ್ದು ನೀಡುವುದಕ್ಕೆ ಪ್ರತ್ಯೇಕವಾದ ಕೊಠಡಿಯನ್ನು ಒದಗಿಸಲು ಅಧ್ಯಕ್ಷರಲ್ಲಿ ಕೋರಿದರು.

ವೈದ್ಯಾಧಿಕಾರಿಗಳು ಡಾ|| ಸುನೀತಾರವರು ಮಾತನಾಡಿ, ಶಿವಕುಮಾರ್ ಹಾಗೂ ಸ್ಫೂರ್ತಿ ಎಂಬುವವರು ಸ್ವಾಬ್ ಕಲೆಕ್ಟರ್ ಆಗಿ ಕಾರ್ಯನಿರ್ವಹಿಸುತ್ತಿರುವ ಇವರಿಗೆ ವೇತನ ಪಾವತಿ ಮಾಡಿರುವುದಿಲ್ಲ. ಇದರ ಬಗ್ಗೆ ಸಂಬಂಧಪಟ್ಟ ಆರೋಗ್ಯಾಧಿಕಾರಿಗಳು, ಬಿಬಿಎಂಪಿರವರು ಕ್ರಮ ವಹಿಸಿರುವುದಿಲ್ಲ, ಆದ್ದರಿಂದ ಕೂಡಲೇ ವೇತನ ಮಾಡಲು ಕ್ರಮ ಕೈಗೊಳ್ಳುವಂತೆ ಅಧ್ಯಕ್ಷರನ್ನು ಕೋರಿದರು.

ರೈಲ್ವೆ ನಿಲ್ದಾಣದಲ್ಲಿ ಕೋವಿಡ್ ಟೆಸ್ಟ್ ಮಾಡಲು ರೈಲ್ವೆ ನಿಲ್ದಾಣದ ಮುಂಭಾಗ ಪ್ರತಿ ದಿನ ಸ್ವಾಬ್ ಕಲೆಕ್ಟರ್ಸ್ ಕಾರ್ಯನಿರ್ವಹಿಸುತ್ತಿರುತ್ತಾರೆ. ಸದರಿ ಸ್ಥಳದಲ್ಲಿ ಕೋವಿಡ್ ಟೆಸ್ಟ್ ಮಾಡಲು ರೈಲ್ವೆ ಅಧಿಕಾರಿಗಳು ಪ್ರತಿ ತಿಂಗಳು ಪ್ರತ್ಯೇಕವಾಗಿ ಅನುಮತಿ ಪತ್ರ ಪಡೆಯಲು ಸೂಚಿಸಿರುತ್ತಾರೆ. ವೈದ್ಯಾಧಿಕಾರಿಗಳು ಅಧ್ಯಕ್ಷರೊಂದಿಗೆ ಮಾತನಾಡಿ, ಪ್ರತಿ ತಿಂಗಳು ಪ್ರತ್ಯೇಕವಾಗಿ ಅನುಮತಿ ಪಡೆಯುವ ಬದಲಿಗೆ ಖಾಯಂ ಆಗಿ ರೈಲ್ವೆ ನಿಲ್ದಾಣದಲ್ಲಿ ಕೋವಿಡ್ ಟೆಸ್ಟ್ ಮಾಡಲು ರೈಲ್ವೆ ಇಲಾಖೆಯಿಂದ ಅನುಮತಿ ದೊರಕಿಸಿಕೊಡಲು ಕೋರಿದರು.

ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಕೋವಿಡ್ ವೈದ್ಯರಿಗೆ ಪ್ರತಿ ಮಾಹೆಯ ಪೇ ಸ್ಲಿಪ್‌ಗಳನ್ನು ಹಾಗೂ ಗುರುತಿನ ಚೀಟಿಯನ್ನು ನೀಡಲು ಸಂಬಂಧಪಟ್ಟವರಿಗೆ ಸೂಚನೆ ನೀಡಲು ವೈದ್ಯಾಧಿಕಾರಿಗಳು ಅಧ್ಯಕ್ಷರಲ್ಲಿ ಕೋರಿದರು.

**3) ಪೌರ ಕಾರ್ಮಿಕರ ಬಗ್ಗೆ:**

ವಾರ್ಡ್‌ನಲ್ಲಿ ಕಾರ್ಯನಿರ್ವಹಿಸುತ್ತಿರುವ ಪೌರ ಕಾರ್ಮಿಕರಿಗೆ ಪ್ರತಿ ತಿಂಗಳು ಪೇಸ್ಲಿಪ್‌ನ್ನು ನೀಡಲು. ಪೇಪರ್‌ಗಳನ್ನು ನೀಡದ್ದರೂ ಸಹ ಪೇಸ್ಲಿಪ್‌ನ್ನು ನೀಡಿರುವುದಿಲ್ಲ. ಆದ್ದರಿಂದ ಪ್ರತಿ ತಿಂಗಳು ಪೇಸ್ಲಿಪ್‌ನ್ನು ನೀಡಲು ಹಿರಿಯ ಹಾಗೂ ಕಿರಿಯ ಆರೋಗ್ಯ ಪರಿವೀಕ್ಷಕರು ಅಧ್ಯಕ್ಷರಲ್ಲಿ ಕೋರಿದರು. ಹಾಗೂ ಲಕ್ಷ್ಮಿ. ಪೌರ ಕಾರ್ಮಿಕರ ವೇತನ ಪಾವತಿಯಾಗಿರುವುದಿಲ್ಲ ಎಂದು ಕಿರಿಯ ಆರೋಗ್ಯ ಪರಿವೀಕ್ಷಕರು ಸಭೆಗೆ ತಿಳಿಸಿದರು. ಇದರ ಬಗ್ಗೆ ನೋಡಲ್ ಅಧಿಕಾರಿಗಳು ಮಾತನಾಡಿ, ಸಂಬಂಧಪಟ್ಟ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ) ರವರಿಗೆ ಕ್ರಮವಹಿಸಲು ಸೂಚಿಸುವುದಾಗಿ ತಿಳಿಸಿದರು.

**4) ಕಸದ ವಿಲೇವಾರಿ ಬಗ್ಗೆ:**

ಮಾರ್ಷಲ್ ಮಾತನಾಡಿ, ವಾರ್ಡ್‌ನ ವಿವಿಧ ಭಾಗಗಳಲ್ಲಿ ಬ್ಲ್ಯಾಕ್‌ಸ್ಪಾಟ್‌ಗಳು ಹೆಚ್ಚಾಗುತ್ತಿರುವುದನ್ನು ತಡೆಯುವ ಸಲುವಾಗಿ, ಬ್ಲ್ಯಾಕ್‌ಸ್ಪಾಟ್‌ಗಳಲ್ಲಿ ಕಸ ಹಾಕುವವರಿಗೆ ದಂಡವಿಧಿಸುವ ಬಗ್ಗೆ ನಾಮಫಲಕ ಅಳವಡಿಸಲು ಕೋರಿದ್ದು, ಇದರ ಬಗ್ಗೆ ಅಧ್ಯಕ್ಷರು ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ಕ್ರಮವಹಿಸಲು ಸೂಚಿಸಿದರು.

ಹಸಿ ಕಸ ಹಾಗೂ ಒಣ ಕಸವನ್ನು ವಿಂಗಡಿಸಿ, ಆಟೋರಿಕ್ಷಾಗಳಿಗೆ ಕೊಡಲು, ಧ್ವನಿವರ್ಧಕಗಳ ಮೂಲಕ ಸಾರ್ವಜನಿಕರಿಗೆ ಜನಜಾಗೃತಿ ಮೂಡಿಸಲು ಹಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಘನತ್ಯಾಜ್ಯದ ಗುತ್ತಿಗೆದಾರರಿಗೆ ಅಧ್ಯಕ್ಷರು ಸೂಚಿಸಿದರು.

ಕೇಶವ ಚಿತ್ರಮಂದಿರದ ಹತ್ತಿರ ಕಸದ ಪಾಯಿಂಟ್ ಇದ್ದು, ಕಸದ ಪಾಯಿಂಟ್‌ನ್ನು ತೆರವುಗೊಳಿಸಲು ಸಾರ್ವಜನಿಕರು ಮನವಿ ಮಾಡಿರುತ್ತಾರೆ. ಮೇಲ್ವಿಚಾರಕರಾದ ಜಾನ್ ಮಾತನಾಡಿ, ಬದಲಿ ವ್ಯವಸ್ಥೆ ಇಲ್ಲದಿರುವ ಕಾರಣ ಯಥಾಸ್ಥಿತಿ ಮುಂದುವರೆಸುವುದು ಅನಿವಾರ್ಯವೆಂದು ತಿಳಿಸಿದರು.

**5) ಮಾರ್ಷಲ್‌ಗಳ ಕಾರ್ಯ ವೈಖರಿ ಬಗ್ಗೆ:-**

ಮಾರ್ಷಲ್‌ಗಳ ಕಾರ್ಯ ವೈಖರಿಯನ್ನು ವಿಚಾರಿಸುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ರಾತ್ರಿ ಪಾಳಿಯಲ್ಲಿ ಗಸ್ತಿನಲ್ಲಿರುವಾಗ, ರಸ್ತೆಯಲ್ಲಿ ಕಸ ಸುರಿಯುವವರೊಂದಿಗೆ ಮಾತಿನ ಚಕಮಕಿ ನಡೆದಲ್ಲಿ, ಪೋಲಿಸ್ ಮಧ್ಯಸ್ಥಿಕೆ ಬದಲಿಗೆ, ವಾರ್ಡ್ ಕಮಿಟಿ ಸದಸ್ಯರೊಂದಿಗೆ ಚರ್ಚಿಸಿ ಸಮಸ್ಯೆ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಮಾರ್ಷಲ್‌ಗಳಿಗೆ ಸೂಚಿಸಿದರು.

ವಾರ್ಡ್ ಮಾರ್ಷಲ್‌ಗಳು ಮಾಸ್ಕ್ ಧರಿಸದವರಿಗೆ ಹಾಗೂ ರಸ್ತೆಯಲ್ಲಿ ಉಗುಳುವವರಿಗೆ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಎಲ್ಲೆಂದರಲ್ಲಿ ಮೂತ್ರ ವಿಸರ್ಜಿಸುವವರಿಗೆ ದಂಡ ವಿಧಿಸುತ್ತಿದ್ದು, ಸದರಿ ದಂಡ ವಿಧಿಸಲು ಸರ್ಕಾರದ ಆದೇಶ ಪ್ರತಿಯನ್ನು ಮುಂದಿನ ಸಭೆಯಲ್ಲಿ ನೀಡಲು ಅಧ್ಯಕ್ಷರು ಸೂಚಿಸಿದರು.

**6) ಕಂದಾಯ ಇಲಾಖೆ:**

ಹಿಂದೆ ಚರ್ಚಿಸಿದಂತೆ, ಹೊಸದಾಗಿ ಮತದಾರರ ಗುರುತಿನ ಚೀಟಿ, ಸ್ಮಾರ್ಟ್ ಕಾರ್ಡ್ ಪಡೆಯುವವರಿಗೆ, ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು, ಧ್ವನಿವರ್ಧಕವಿರುವ ಆಟೋಗಳಲ್ಲಿ ಪ್ರಚಾರ ಮಾಡಲು ಕಂದಾಯ ಇಲಾಖೆಯವರಿಗೆ ಸೂಚಿಸಲಾಯಿತು.

**7) ಬಿಡಬ್ಲ್ಯೂಎಸ್ಎಸ್‌ಬಿ :**

ವಾರ್ಡ್ ವ್ಯಾಪ್ತಿಯಲ್ಲಿ ಮ್ಯಾನ್‌ಹೋಲ್‌ಗಳಿಂದ ತೆಗೆದ ಹೂಳನ್ನು ಸಂಬಂಧಪಟ್ಟ ಗುತ್ತಿಗೆದಾರರು ಅಲ್ಲಿಯೇ ಹಾಕಿರುವುದನ್ನು ಗಮನಿಸಲಾಗಿದ್ದು, ನಂತರದ ದಿನಗಳಲ್ಲಿ ಸದರಿ ಹೂಳನ್ನು ತೆಗೆಯುವುದಾಗಿ ಹೇಳಿದ್ದರೂ ಸಹ ಇದುವರೆಗೂ ಕ್ರಮ ತೆಗೆದುಕೊಳ್ಳದೇ ಇರುವುದರಿಂದ ಸಾರ್ವಜನಿಕರು ಸಭೆಯಲ್ಲಿ ತಿಳಿಸಿರುವ ದೂರಿರುವ ಅನ್ವಯ ಸಂಬಂಧಪಟ್ಟ ಸಹಾಯಕ ಇಂಜಿನಿಯರ್‌ಗೆ ಸಭೆಯಲ್ಲಿ ಹೂಳನ್ನು ಕೂಡಲೇ ತೆಗೆಯಲು ಸೂಚನೆ ನೀಡಲಾಯಿತು.

**8) ಬೆಸ್ಕಾಂ ಇಲಾಖೆ:**

ಬಿಬಿಎಂಪಿ ಹೆರಿಗೆ ಆಸ್ಪತ್ರೆ ಹಾಗೂ ವ್ಯಾಯಾಮ ಶಾಲೆ ಹತ್ತಿರ ದುರಸ್ತಿಗೊಳಗಾದ ಹಾಗೂ ಅನುಪಯುಕ್ತ ವಿದ್ಯುತ್ ಕಂಬಗಳನ್ನು ಸಂಬಂಧಪಟ್ಟ ಇಲಾಖೆ ನೌಕರರು ತೆರವುಗೊಳಿಸಿ, ಅದರಲ್ಲಿರುವ ಕಬ್ಬಿಣದ ಭಾಗಗಳನ್ನು ಮಾತ್ರ ತೆಗೆದು, ಉಳಿದ ಡೆಬ್ರಿಸ್‌ನ್ನು ಅಲ್ಲಿಯೇ ಬಿಟ್ಟು ಹೋಗಿರುತ್ತಾರೆ. ಇದನ್ನು ಸಾರ್ವಜನಿಕರು ಸಭೆಯಲ್ಲಿ ತಿಳಿಸಿರುತ್ತಾರೆ. ಅದರಂತೆ, ಸಂಬಂಧಪಟ್ಟ ಬೆಸ್ಕಾಂ ನೌಕರರಿಗೆ ಹಾಗೂ ಗುತ್ತಿಗೆದಾರರಿಗೆ ಕಬ್ಬಿಣದ ಭಾಗಗಳ ಜೊತೆಗೆ ಡೆಬ್ರಿಸ್‌ನ್ನು ಸಹ ಸದರಿ ಸ್ಥಳಗಳಿಂದ ತೆರವುಗೊಳಿಸಬೇಕೆಂದು ಸೂಚಿಸಲಾಗಿರುತ್ತದೆ.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Yashavanth. C. V
(ಯಶವಂತ್ ಸಿ. ವಿ.)
ಸಹಾಯಕ ಅಭಿಯಂತರರು ಹಾಗೂ
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:37

(ಎನ್. ಜಿ. ಉಮೇಶ್)
ಸ.ಕಾ.ನಿ.ಅ. ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:37